3) ಉಳಿದ ಹಣವನ್ನು ಬಿಡುಗಡೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ: ಈ ಹಣವನ್ನು ಯಾವಾಗ ಬಿಡುಗಡೆ ಮಾಡಿ ಕಾಮಗಾರಿ ಪೂರ್ಣಗೊಳಿಸಲಾಗುವುದು?

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು)

1) ಒಟ್ಟು 40 ಕೊಠಡಿಗಳು.

**ತಾಲ್ಲೂಕುವಾರು ವಿವರ**

| | | | |
|---|---|---|---|
| 1) | ದೊಡ್ಡಬಳ್ಳಾಪುರ | - | 5 |
| 2) | ದೇವನಹಳ್ಳಿ | - | 5 |
| 3) | ರಾಮನಗರಂ | - | 5 |
| 4) | ಕನಕಪುರ | - | 5 |
| 5) | ಚೆನ್ನಪಟ್ಟಣ | - | 5 |
| 6) | ಮಾಗಡಿ | - | 5 |
| 7) | ಹೊಸಕೋಟೆ | - | 5 |
| 8) | ನೆಲಮಂಗಲ | - | 5 |

2) ಒಂದು ಕೊಠಡಿ ನಿರ್ಮಾಣಕ್ಕೆ ರೂ. 95,000.00 ಗಳೆಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ನಿಗಧಿಪಡಿಸಿಕೊಂಡಿದೆ. ರೂ. 30.00 ಲಕ್ಷಗಳು ಬಿಡುಗಡೆಯಾಗಿದೆ. ಒಂದು ಕೊಠಡಿಗೆ ರೂ. 75,000.00 ಗಳಂತೆ ಶಿಕ್ಷಣ ಇಲಾಖೆಯಿಂದ ಬಿಡುಗಡೆ ಮಾಡಲಾಗಿದೆ. ಉಳಿದ ರೂ. 20,000.00 ಗಳನ್ನು ಜಿಲ್ಲಾ ಪಂಚಾಯತ್‌ನಿಂದ ಭರಿಸಬೇಕಾಗಿದೆ.

3) ಸರ್ಕಾರವು ತನ್ನ ಪಾಲಿನ ಹಣವನ್ನು ಪೂರ್ಣವಾಗಿ ಬಿಡುಗಡೆ ಮಾಡಿದೆ. ಉಳಿದ ಹಣವನ್ನು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ತನ್ನ ಜಿಲ್ಲಾ ವಲಯ ಅನುದಾನದಿಂದ ಬಿಡುಗಡೆ ಮಾಡಲು ಸೂಚಿಸಲಾಗಿದೆ.

1998-99 ನೇ ಸಾಲಿನಲ್ಲಿ ಮುಂದುವರೆದ ಕಾಮಗಾರಿ ಕೆಲಸ ಪೂರ್ಣಗೊಳಿಸಲಾಗುವುದು.

## ಮಾಗಡಿ ತಾಲ್ಲೂಕಿನ ಕುದೂರು ಸರ್ಕಾರಿ ಕಾಲೇಜಿಗೆ ಸ್ವಂತ ಕಟ್ಟಡ, ಹಾಗೂ ಉಪನ್ಯಾಸಕರ ಕೊರತೆ ನಿವಾರಿಸುವ ಬಗ್ಗೆ

391 (689) ಶ್ರೀ ಹೆಚ್. ಸಿ. ಬಾಲಕೃಷ್ಣ (ಮಾಗಡಿ) : ಮಾನ್ಯ ಪ್ರಾಥಮಿಕ, ಪ್ರೌಢ ಮತ್ತು ಉನ್ನತ ಶಿಕ್ಷಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ ?

1) ಮಾಗಡಿ ತಾಲ್ಲೂಕು ಕುದೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಸ್ವಂತ ಕಟ್ಟಡ ಹಾಗೂ ಉಪನ್ಯಾಸಕರು ಇಲ್ಲದಿರುವುದರಿಂದ ವಿದ್ಯಾರ್ಥಿಗಳಿಗೆ ಭಾರಿ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

2) ಸದರಿ ಕಾಲೇಜಿನ ಸ್ವಂತ ಕಟ್ಟಡ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು?

3) ರಾಜ್ಯ ಉಚ್ಚನ್ಯಾಯಾಲಯವು ನಿರ್ದೇಶನ ನೀಡಿದ್ದರೂ ಕೂಡ ಸರ್ಕಾರ ಈ ಕಾಲೇಜಿಗೆ ಉಪನ್ಯಾಸಕರನ್ನು ನಿಯೋಜಿಸದಿರಲು ಕಾರಣವೇನು?

4) ಸದರಿ ಕಾಲೇಜಿಗೆ ಎಷ್ಟು ಉಪನ್ಯಾಸಕರ ಕೊರತೆ ಇದೆ? (ವಿಷಯವಾರು ವಿವರ ನೀಡುವುದು)

5) ಈ ಉಪನ್ಯಾಸಕರ ಕೊರತೆಯನ್ನು ಯಾವಾಗ ನಿವಾರಿಸಲಾಗುವುದು?

ಶ್ರೀ ಹೆಚ್. ಜಿ. ಗೋವಿಂದಗೌಡ (ಪ್ರಾಥಮಿಕ, ಪ್ರೌಢ ಮತ್ತು ಉನ್ನತ ಶಿಕ್ಷಣ ಸಚಿವರು)

1) ಬಂದಿದೆ

2) ಕಾಲೇಜಿನ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ನಿವೇಶನವನ್ನು ಪಡೆದಿದ್ದು, ನಕ್ಷೆ ಮತ್ತು ಅಂದಾಜು ಪಟ್ಟಿಯನ್ನು ಪಡೆಯುವುದಕ್ಕಾಗಿ ಲೋಕೋಪಯೋಗಿ ಇಲಾಖೆಯನ್ನು ಕೋರಲಾಗಿದೆ. ನಕ್ಷೆ ಮತ್ತು ಅಂದಾಜು ಪಟ್ಟಿ ಬಂದ ಕೂಡಲೇ ಮುಂದಿನ ಕ್ರಮ ಕೈಗೊಳ್ಳಲಾಗುವುದು.

3) ಈ ವಿಷಯದಲ್ಲಿ ಸರ್ಕಾರಕ್ಕೆ ರಾಜ್ಯ ಉಚ್ಚ ನ್ಯಾಯಾಲಯದಿಂದ ಯಾವುದೇ ನಿರ್ದೇಶನ ಇರುವುದಿಲ್ಲ.

4) ಇಬ್ಬರು ವಾಣಿಜ್ಯ ಶಾಸ್ತ್ರ ಉಪನ್ಯಾಸಕರ ಕೊರತೆ ಇದೆ.

5) ಕಾಲೇಜುಗಳಲ್ಲಿ ಕಡಿಮೆ ಕಾರ್ಯಭಾರ ಇದ್ದ ಹೆಚ್ಚುವರಿ ಬೋಧಕರನ್ನು ಒಂದು ಕಾಲೇಜಿನಿಂದ ಮತ್ತೊಂದು ಕಾಲೇಜಿಗೆ ನಿಯೋಜಿಸಲು ಹಾಗೂ ಕಾಲೇಜುಗಳಲ್ಲಿ ಉದ್ಭವಿಸುವ ಹೆಚ್ಚುವರಿ ಕಾರ್ಯಭಾರವನ್ನು ನಿರ್ವಹಿಸಲು ಅತಿಥಿ ಉಪನ್ಯಾಸಕರನ್ನು ಆಹ್ವಾನಿಸಲು ಉದ್ದೇಶಿಸಲಾಗಿದೆ. ಖಾಲಿ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು.

**ಮಾಗಡಿ ತಾಲ್ಲೂಕಿನಲ್ಲಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಬ್ಬಂದಿ ಕೊರತೆ**

342 (662) ಶ್ರೀ ಹೆಚ್. ಸಿ. ಬಾಲಕೃಷ್ಣ (ಮಾಗಡಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

1) ಮಾಗಡಿ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ :ಘಟಕ ಹಾಗೂ ತಾಲ್ಲೂಕು ಆಸ್ಪತ್ರೆಗಳ ಸಂಖ್ಯೆ ಎಷ್ಟು? ಅವು ಯಾವುವು.

2) ಈ ಕೇಂದ್ರಗಳಲ್ಲಿನ ಸಿಬ್ಬಂದಿ ಸ್ವರೂಪವೇನು? (ಸ್ಟಾಫ್ ಪ್ಯಾಟ್ರನ್) ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು? (ಪ್ರತಿ ಆಸ್ಪತ್ರೆಯ ಸಿಬ್ಬಂದಿಯ ಸ್ವರೂಪ ಹಾಗೂ ಖಾಲಿ ಇರುವ ಹುದ್ದೆಗಳ ವಿವರ ನೀಡುವುದು)

3) ಈ ಹುದ್ದೆಗಳು ಖಾಲಿ ಇರುವುದರಿಂದ ಸಾರ್ವಜನಿಕರಿಗೆ ತೀವ್ರವಾದ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

4) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?